ಬೆಂಗಳೂರು ನಗರ ವಿಶ್ವವಿದ್ಯಾನಿಲಯ BENGALURU CITY UNIVERSITY
BE BOUNDLESS
Office of the Registrar Evaluation, Central College Campus, Dr Ambedkar Veedhi, Bengaluru – 560001
Ph: 080-22295559/29572003 Mail: registrarevlubcu@gmail.com/regev@bcu.ac.in

ಸಂಖ್ಯೆ:ಬೆಂ.ನ.ವಿ/ಪ.ವಿ/ಪೋ.ಪ್ರ/ಪಿ.ಜಿ /2023–24 ದಿನಾಂಕ: 21.03.2024

# ಅಧಿಸೂಚನೆ

**ವಿಷಯ:** ಸ್ನಾತಕೋತ್ತರ ಕೋರ್ಸುಗಳ ಶೈಕ್ಷಣಿಕ ವರ್ಷ ನವೆಂಬರ್/ಡಿಸೆಂಬರ್ 2023ರಿಂದ ನಡೆದಿರುವ ಎಲ್ಲಾ ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಳನ್ನು ಒದಗಿಸುವ ಬಗ್ಗೆ.

**ಉಲ್ಲೇಖ:** 1. ವಿಶ್ವವಿದ್ಯಾಲಯದ ಅಧಿಸೂಚನೆಯ ಸಂಖ್ಯೆ:ಬೆಂ.ನ.ವಿ/ಪ.ವಿ/ಪೋ.ಪ್ರ./ಪಿ.ಜಿ/2023–24/134, ದಿನಾಂಕ 15.09.2023.
2. ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 27.02.2024.

******

ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಕೆಲವು ಸ್ನಾತಕೋತ್ತರ ಕೋರ್ಸುಗಳ ವಿದ್ಯಾರ್ಥಿಗಳು ಪರೀಕ್ಷೆಗಳ ಫೋಟೋ ಪ್ರತಿಗಳನ್ನು ಒದಗಿಸುವಂತೆ ಕೋರಿ ಮನವಿ ಸಲ್ಲಿಸಿದ್ದರು. ಉಲ್ಲೇಖ 1ರಲ್ಲಿ ಸ್ನಾತಕೋತ್ತರ ಬೆಸ ಸಂಖ್ಯೆಯ ಪರೀಕ್ಷೆಗಳಿಗೆ ಫೋಟೋ ಪ್ರತಿಗಳನ್ನು ಅರ್ಜಿಸಲ್ಲಿಸುವ ವಿದ್ಯಾರ್ಥಿಗಳಿಗೆ ಒದಗಿಸಲು ವಿದ್ಯಾವಿಷಯಕ ಪರಿಷತ್ತಿನ ನಿರ್ಣಯ ತೆಗೆದುಕೊಂಡು ಫೋಟೋ ಪ್ರತಿಗಳನ್ನು ತೆಗೆದುಕೊಳಲು ಅವಕಾಶ ಮಾಡಿಕೊಡಲಾಗಿತ್ತು, ಆದರೆ ವಿದ್ಯಾರ್ಥಿಗಳು ಎಲ್ಲಾ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡುವಂತೆ ಮನವಿ ಸಲ್ಲಿಸಿದ ಕಾರಣ, ವಿಷಯವನ್ನು ದಿನಾಂಕ 27.02.2024 ರಂದು ನಡೆದ ವಿದ್ಯಾವಿಷಯಕ ಸಭೆಯ ಮುಂದೆ ಸೂಕ್ತ ನಿರ್ಣಯಕ್ಕಾಗಿ ಮಂಡಿಸಲಾಗಿತ್ತು. ಮತ್ತು ವಿದ್ಯಾವಿಷಯಕ ಪರಿಷತ್ತಿನ ಸಭೆಯಲ್ಲಿ ಈ ರೀತಿ ನಿರ್ಣಯ ತೆಗೆದುಕೊಂಡಿದೆ.

- **ಸುಧೀರ್ಘ ಚರ್ಚೆಯ ನಂತರ ಸ್ನಾತಕೋತರ ವ್ಯಾಸಂಗದ ಎಲ್ಲಾ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಳನ್ನು ಅರ್ಜಿ ಸಲ್ಲಿಸುವ ವಿದ್ಯಾರ್ಥಿಗೆ ನಿಗಧಿತ ಶುಲ್ಕ ಪಡೆದು ನೀಡಬೇಕೆಂದು ಸಭೆ ತೀರ್ಮಾನಿಸಿತು.**

ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದಂತೆ ತಕ್ಷಣದಿಂದ ಜಾರಿಗೆ ಬರುವಂತೆ ಇನ್ನು ಮುಂದೆ ನಡೆಯುವ ಸ್ನಾತಕೋತ್ತರ ಕೋರ್ಸುಗಳ ಎಲ್ಲಾ ಪರೀಕ್ಷೆಗಳ ಫಲಿತಾಂಶ ಪ್ರಕಟಿಸಿದ ನಂತರ ವಿದ್ಯಾರ್ಥಿಗಳು ಬಯಸಿದಲ್ಲಿ ವಿದ್ಯಾರ್ಥಿಗಳು ರೂ.500/– ಶುಲ್ಕ ಪಾವತಿಸಿ, ವಿಶ್ವವಿದ್ಯಾಲಯ ನಿಗದಿಪಡಿಸಿದ ಅವಧಿಯಲ್ಲಿ ಮಾತ್ರ ನಿಯಮದಂತೆ ಅರ್ಜಿ ಸಲ್ಲಿಸಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿಯನ್ನು ಪಡೆಯಬಹುದಾಗಿದೆ. ನಿಗಧಿತ ಅವಧಿಯ ನಂತರ ಫೋಟೋ ಪ್ರತಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರುಗಳಿಗೆ, ಬೆಂಗಳೂರು ನಗರ ವಿಶ್ವವಿದ್ಯಾಲಯ.
2. ಸ್ನಾತಕೋತ್ತರ ಕೋರ್ಸುಗಳನ್ನು ಹೊಂದಿರುವ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಕುಲಪತಿಗಳು/ಕುಲಸಚಿವರು(ಆ)/ವಿತ್ತಾಧಿಕಾರಿಗಳು/ಅವರ ಆಪ್ತಕಾರ್ಯದರ್ಶಿಗಳಿಗೆ ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.